17.12.2021

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 574

ಸದಸ್ಯರ ಹೆಸರು : ಡಾ|| ತೇಜಸ್ವಿನಿ ಗೌಡ

ಉತ್ತರಿಸುವ ಸಚಿವರು : ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು

ಉತ್ತರಿಸುವ ದಿನಾಂಕ : 17.12.2021

| ಕ್ರ. ಸಂ | ಪ್ರಶ್ನೆ | ಉತ್ತರ |
| --- | --- | --- |
| ಅ. | ರಾಜ್ಯದ ಎಲ್ಲಾ ಗ್ರಾಮಗಳಿಗೆ ನಿಯಮಿತವಾಗಿ ಸರ್ಕಾರಿ ಬಸ್‌ಗಳು ಸಂಚರಿಸುತ್ತಿವೆಯೇ; ಶಾಲಾ ಮಕ್ಕಳಿಗೆ ಸಕಾಲಕ್ಕೆ ಸಂಚಾರ ಲಭ್ಯವೇ; | ಕ.ರಾ.ರ.ಸಾ.ನಿಗಮ:-<br><br>ನಿಗಮದ ವ್ಯಾಪ್ತಿಯ 17 ಜಿಲ್ಲೆಗಳಲ್ಲಿ 21569 ಹಳ್ಳಿಗಳ ಪೈಕಿ 18564 ಹಳ್ಳಿಗಳಿಗೆ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿರುತ್ತದೆ. ಉಳಿದಂತೆ, 3005 ಹಳ್ಳಿಗಳಿಗೆ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿರುವುದಿಲ್ಲ. ಸಾರಿಗೆ ಸೌಲಭ್ಯ ಕಲ್ಪಿಸದ 3005 ಹಳ್ಳಿಗಳ ಪೈಕಿ 3002 ಹಳ್ಳಿಗಳು ಈ ಹಿಂದೆ ರಾಷ್ಟ್ರೀಕೃತವಲ್ಲದ ವಲಯದಲ್ಲಿರುತ್ತದೆ. ಸದರಿ ಬಹುಪಾಲು ಹಳ್ಳಿಗಳಿಗೆ ಖಾಸಗಿ ಪ್ರವರ್ತಕರುಗಳು ಸಾರಿಗೆ ಸೌಲಭ್ಯವನ್ನು ಕಲ್ಪಿಸುತ್ತಿರುತ್ತಾರೆ.<br><br>ಶಾಲಾ ಕಾಲೇಜು ವಿದ್ಯಾರ್ಥಿಗಳ ಬೇಡಿಕೆಗನುಗುಣವಾಗಿ ಅವಶ್ಯಕ ಸರತಿಗಳನ್ನಳವಡಿಸಿ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗುತ್ತಿದೆ. ಸದರಿ ಅನುಸೂಚಿಗಳು/ ಸುತ್ತುವಳಿಗಳು ಶಾಲಾ ಕಾಲೇಜು ವಿದ್ಯಾರ್ಥಿಗಳ ಅವಶ್ಯಕತೆಗೆ ಅನುಗುಣವಾಗಿದೆ.<br><br>ಬೆಂ.ಮ.ಸಾ.ಸಂಸ್ಥೆ:-<br><br>ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು, ಬೆಂಗಳೂರು ನಗರ ಮತ್ತು ಹೊರವಲಯದ ಪ್ರದೇಶಗಳ ಸಾರ್ವಜನಿಕ ಪ್ರಯಾಣಿಕರಿಗೆ, ಸುರಕ್ಷಿತ ಹಾಗೂ ಮಿತವ್ಯಯಕರ ಪ್ರಯಾಣ ದರಗಳಲ್ಲಿ ವಿವಿಧ ಮಾದರಿಯ ಬಸ್ಸುಗಳೊಂದಿಗೆ 45 ಬಸ್ ಘಟಕಗಳಿಂದ ಉತ್ತಮ ಸಾರಿಗೆ ಸೌಲಭ್ಯವನ್ನು ಒದಗಿಸುತ್ತಿದೆ. ಪ್ರಸ್ತುತ ಬೆಂ.ಮ.ಸಾ.ಸಂಸ್ಥೆ ವತಿಯಿಂದ ಪ್ರತಿದಿನ (ದಿನಾಂಕ 30-11-2021 ರಂತೆ) 5288 ಬಸ್ಸುಗಳಿಂದ 09.00 ಲಕ್ಷ ಕಿ.ಮೀಗಳಲ್ಲಿ 48,204 ಸರತಿಗಳನ್ನು ಕಾರ್ಯಾಚರಣೆಗೊಳಿಸುತ್ತಿದೆ. ಪ್ರಯಾಣಿಕರ ಬೇಡಿಕೆ ಹಾಗೂ ಒತ್ತಡಕ್ಕನುಗುಣವಾಗಿ ಹೊಸ ಮಾರ್ಗಗಳನ್ನು ಪರಿಚಯಿಸುವುದು, ಹಾಲಿಯಿರುವ ಮಾರ್ಗಗಳಲ್ಲಿ ಸಾರಿಗೆಗಳನ್ನು ಹೆಚ್ಚಿಸುವುದು, ಪ್ರಯಾಣಿಕರ ಸಂಚಾರ ದಟ್ಟಣೆಗನುಗುಣವಾಗಿ ಸಾರಿಗೆಗಳನ್ನು ಪರಿಷ್ಕರಿಸಿ, ಕಾರ್ಯಾಚರಣೆಗೊಳಿಸಲಾಗುತ್ತಿದೆ.<br><br>ವಾ.ಕ.ರ.ಸಾ.ಸಂಸ್ಥೆ:<br><br>ವಾ.ಕ.ರ.ಸಾ ಸಂಸ್ಥೆ ವ್ಯಾಪ್ತಿಯ 6 ಜಿಲ್ಲೆಗಳ 9 ವಿಭಾಗಗಳ 4610 ಹಳ್ಳಿಗಳ ಪೈಕಿ ಸಂಚಾರ ಯೋಗ್ಯ ರಸ್ತೆಗಳಿಲ್ಲದ 50 ಹಳ್ಳಿಗಳಿಗೆ ಸಾರಿಗೆ ಸೌಲಭ್ಯ ಕಲ್ಪಿಸಲಾಗಿಲ್ಲ. ಸದರಿ 50 ಹಳ್ಳಿಗಳ ಸಮೀಪದ ಹಳ್ಳಿಗಳಿಗೆ ಸಾರಿಗೆ ವ್ಯವಸ್ಥೆ ಕಲ್ಪಿಸಿದೆ. ಶಾಲಾ |

| | | |
|---|---|---|
| | | ಮತ್ತಿತರೆ ಅನುಕೂಲವಾಗುವಂತೆ ಬೇಡಿಕೆಗನುಗುಣವಾಗಿ ಅವಶ್ಯಕ ಸಾರಿಗೆಗಳನ್ನು ಒದಗಿಸಿ ಸಾರಿಗೆ ಸೌಲಭ್ಯ ಕಲ್ಪಿಸಲಾಗಿದೆ.<br><br>ಕ.ಕ.ರ.ಸಾ.ನಿಗಮ:-<br><br>ನಿಗಮದ ವ್ಯಾಪ್ತಿಯಲ್ಲಿ ಒಟ್ಟು 5287 ಗ್ರಾಮಗಳಿದ್ದು, ಇವುಗಳ ಪೈಕಿ ರಸ್ತೆ ಸಂಪರ್ಕ ಹೊಂದಿರುವ 5232 ಗ್ರಾಮಗಳಿಗೆ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ. ಉಳಿದ 55 ಗ್ರಾಮಗಳಿಗೆ ಭಾರಿ ವಾಹನಗಳ ಕಾರ್ಯಾಚರಣೆಗೆ ಯೋಗ್ಯ ರಸ್ತೆಯಿಲ್ಲದ ಪ್ರಯುಕ್ತ ಸಾರಿಗೆ ಸೌಕರ್ಯ ಕಲ್ಪಿಸಲು ಸಾಧ್ಯವಾಗುವುದಿಲ್ಲ. ಹದಗೆಟ್ಟಿರುವ ರಸ್ತೆಗಳನ್ನು ದುರಸ್ತಿ ಪಡಿಸುವಂತೆ ದಿನಾಂಕ 10.11.2021 ರಂದು ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಪತ್ರ ಬರೆಯಲಾಗಿರುತ್ತದೆ. ರಸ್ತೆ ಸರಿಪಡಿಸಿದ ತಕ್ಷಣ ಸಾರಿಗೆ ಸೌಲಭ್ಯ ಕಲ್ಪಿಸಲು ಕ್ರಮವಹಿಸಲಾಗುವುದು.<br><br>ಮುಂದುವರೆದು, ಗ್ರಾಮೀಣ ಪ್ರದೇಶಗಳಲ್ಲಿ ಶಾಲಾ ಕಾಲೇಜುಗಳಿಗೆ ಹೋಗಲು ವಿದ್ಯಾರ್ಥಿಗಳಿಗೆ ತೊಂದರೆಯಾಗದಂತೆ ಸಮಯಕ್ಕೆ ಸರಿಯಾಗಿ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ. |
| ಇ. | ಸಾರಿಗೆ ಸಿಬ್ಬಂದಿಯ ಆರೋಗ್ಯ ರಕ್ಷಣೆಗೆ ಇಲಾಖೆ ಕೈಗೊಂಡಿರುವ ಕಲ್ಯಾಣ ಕಾರ್ಯಕ್ರಮಗಳೇನು; | ನಾಲ್ಕೂ ಸಾರಿಗೆ ಸಂಸ್ಥೆಗಳಲ್ಲಿ ಸಾರಿಗೆ ಸಿಬ್ಬಂದಿಯ ಆರೋಗ್ಯ ರಕ್ಷಣೆಗೆ ಕೈಗೊಂಡಿರುವ ಕಲ್ಯಾಣ ಕಾರ್ಯಕ್ರಮದ ವಿವರವನ್ನು 'ಅನುಬಂಧ-ಆ' ದಲ್ಲಿ ನೀಡಲಾಗಿದೆ. |
| ಈ. | ಮಹಿಳಾ ಸಿಬ್ಬಂದಿಗೆ ಪ್ರೋತ್ಸಾಹದಾಯಕವಾದ ವಾತಾವರಣ, ಸುರಕ್ಷಿತವಾಗಿ ಕೆಲಸ ಮಾಡುವ ವ್ಯವಸ್ಥೆ ಒದಗಿಸಲಾಗಿದೆಯೇ; ಮಹಿಳೆಯರಿಗೆ ವಿಶ್ರಾಂತಿ ಕೊಠಡಿ-ಶೌಚಾಲಯ ವ್ಯವಸ್ಥೆ ಇದೆಯೇ; | ನಾಲ್ಕೂ ಸಾರಿಗೆ ಸಂಸ್ಥೆಗಳಲ್ಲಿ ಮಹಿಳಾ ಸಿಬ್ಬಂದಿಗೆ ಪ್ರೋತ್ಸಾಹದಾಯಕವಾದ ವಾತಾವರಣ, ಸುರಕ್ಷಿತವಾಗಿ ಕೆಲಸ ಮಾಡಲು ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ:-<br><br>• ನಾಲ್ಕೂ ಸಾರಿಗೆ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಮಹಿಳಾ ನೌಕರರಿಗೆ ಕಾರ್ಯಸ್ಥಳಗಳಲ್ಲಿ ಪ್ರತ್ಯೇಕ ಶೌಚಾಲಯದ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಅಲ್ಲದೇ, ಘಟಕಗಳಲ್ಲಿ ಮಹಿಳಾ ವಿಶ್ರಾಂತಿ ಕೊಠಡಿ ವ್ಯವಸ್ಥೆ ಮಾಡಲಾಗಿದೆ.<br>• ಸರ್ಕಾರದ ಮಾದರಿಯಲ್ಲಿ 180 ದಿವಸಗಳ ಹೆರಿಗೆ ರಜೆಯನ್ನು ಮಂಜೂರು ಮಾಡಲಾಗುತ್ತದೆ.<br>• ಮಹಿಳಾ ಸಿಬ್ಬಂದಿಗಳಿಗೆ ಮಗುವಿಗೆ 3 ವರ್ಷ ತುಂಬುವವರೆಗೆ ಮಾಸಿಕ ರೂ.1250/-ರಂತೆ ಶಿಶುಪಾಲನಾ ಭತ್ಯೆ (ಎರಡು ಮಕ್ಕಳಿಗೆ ಮಾತ್ರ) ಯನ್ನು ನೀಡಲಾಗುತ್ತಿದೆ.<br>• ಬುದ್ಧಿಮಾಂದ್ಯ/ ಅಂಗವಿಕಲ ಮಕ್ಕಳನ್ನು ನೋಡಿಕೊಳ್ಳಲು ಮಹಿಳಾ ನೌಕರರಿಗೆ ಒಟ್ಟು 730 ದಿವಸಗಳ "ಶಿಶು ಪಾಲನಾ ರಜೆ"ಯನ್ನು ವೇತನ ಸಹಿತವಾಗಿ ಮಂಜೂರು ಮಾಡಲಾಗುತ್ತಿದೆ.<br>• ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕು |

Scanned with CamScanner

| | | |
|---|---|---|
| | | (ತಡೆಗಟ್ಟುವಿಕೆ, ನಿಷೇಧಿಸುವಿಕೆ, ನಿವಾರಿಸುವಿಕೆ) ಅಧಿನಿಯಮದಡಿ ನಿಗಮದ ಎಲ್ಲಾ ಕಾರ್ಯಸ್ಥಾನಗಳಲ್ಲಿ ಮಹಿಳಾ ನೌಕರರ ಆಂತರಿಕ ಸಮಿತಿಯು ಕಾರ್ಯನಿರ್ವಹಿಸುತ್ತಿದೆ.<br><br>ಇದರೊಂದಿಗೆ, ಬೆಂ.ಮ.ಸಾ.ಸಂಸ್ಥೆಯು –<br><br>• ವಿವಿಧ ಪಾಳಿಗಳಲ್ಲಿ ಸಾರಿಗೆ ಸೇವೆಗಳನ್ನು ಕಾರ್ಯಾಚರಿಸಲಾಗುತ್ತಿದ್ದು ಮಹಿಳಾ ಚಾಲನಾ ಸಿಬ್ಬಂದಿಗಳ ಅನುಕೂಲಕ್ಕಾಗಿ, ಅವರ ಕೋರಿಕೆಯ ಮೇರೆಗೆ ಸಾಮಾನ್ಯ ಪಾಳಿಯಲ್ಲಿ ಕರ್ತವ್ಯಕ್ಕೆ ನಿಯೋಜಿಸಲಾಗುತ್ತಿದೆ.<br>• ಮಹಿಳಾ ಚಾಲನಾ ಸಿಬ್ಬಂದಿಗಳ ಅನುಕೂಲಕ್ಕಾಗಿ ಸಂಸ್ಥೆಯಲ್ಲಿ ಕರ್ತವ್ಯ ನಿಯೋಜನಾ ಪದ್ಧತಿಯನ್ನು ಅನುಷ್ಠಾನಗೊಳಿಸಲಾಗಿದೆ. ಡ್ಯೂಟಿ ರೋಟಾ ಪದ್ಧತಿಯನ್ನು ಅನುಸರಿಸುವಾಗ, ಮೊದಲ ಪಾಳಿ ಕರ್ತವ್ಯಕ್ಕೆ ನಿಯೋಜಿಸುವಾಗ ಮಹಿಳಾ ನಿರ್ವಾಹಕಿಯರಿಗೆ ಮೊದಲ ಆದ್ಯತೆ ನೀಡಲಾಗುತ್ತಿದೆ.<br>• ನಿರ್ಭಯಾ ಯೋಜನೆಯಡಿ ಎಲ್ಲಾ ಮಹಿಳಾ ನೌಕರರಿಗೆ ನುರಿತ ತರಬೇತಿದಾರರಿಂದ ಸ್ವರಕ್ಷಣಾ ತರಬೇತಿಯನ್ನು ನೀಡಲಾಗುತ್ತಿದೆ.<br>• ಸಂಸ್ಥೆಯ ವ್ಯಾಪ್ತಿಯಲ್ಲಿರುವ ವಸತಿಗೃಹಗಳ ಹಂಚಿಕೆಯಲ್ಲಿ ಶೇ.15ರಷ್ಟು ಮಹಿಳಾ ನೌಕರರಿಗೆ ಮೀಸಲಾತಿ ಸೌಲಭ್ಯ. |
| ಈ. | ಸರ್ಕಾರಿ ಬಸ್ಸುಗಳಲ್ಲಿ ಪ್ರಯಾಣಿಸಲು, ಖಾಸಗಿಯವರಂತೆಯೇ ಯಾವ ಆಕರ್ಷಕ ವ್ಯವಸ್ಥೆ ಮಾಡಲಾಗಿದೆ; ಪ್ರಯಾಣಿಕರಿಗೆ ಯಾವುದೇ ತೊಂದರೆ ಇಲ್ಲದೆ ಪ್ರಯಾಣಿಸಲು ಕೈಗೊಂಡಿರುವ ಕ್ರಮಗಳೇನು; | ನಾಲ್ಕೂ ಸಾರಿಗೆ ನಿಗಮಗಳ ಬಸ್ಸುಗಳಲ್ಲಿ ಪ್ರಯಾಣಿಸಲು ಆಕರ್ಷಿಸಲು ಕೈಗೊಂಡ ಕ್ರಮಗಳನ್ನು 'ಅನುಬಂಧ-ಆ' ರಲ್ಲಿ ನೀಡಲಾಗಿದೆ. |

| | | |
|---|---|---|
| ಉ. | ಜಿಲ್ಲಾ ಕೇಂದ್ರಗಳಿಗೆ ಹೋಗುವ ಮಾರ್ಗಗಳಲ್ಲಿ ಸೂಕ್ತ ನಿರ್ವಹಣೆ ಇಲ್ಲದ TV-ನೀರಿನ ವ್ಯವಸ್ಥೆ ಇಲ್ಲದಿರುವುದು, ಹಳೆಯ ಬಸ್ಸುಗಳ ಓಡಾಟದ ಬಗ್ಗೆ ಅರಿವಿಗೆ ಬಂದಿದೆಯೇ; ಸೂಕ್ತ ಬಸ್ಸುಗಳನ್ನು (ನೂತನ) ಯಾವಾಗ ಒದಗಿಸಲಾಗುವುದು ? | ಕ.ರಾ.ರ.ಸಾ.ನಿಗಮ, ವಾ.ಕ.ರ.ಸಾ ಸಂಸ್ಥೆ ಮತ್ತು ಕ.ಕ.ರ.ಸಾ ನಿಗಮ:<br>ಜಿಲ್ಲಾ ಕೇಂದ್ರಗಳಿಗೆ ಹೋಗುವ ಮಾರ್ಗದಲ್ಲಿನ ಬಸ್ ನಿಲ್ದಾಣಗಳಲ್ಲಿ ನೀರಿನ ವ್ಯವಸ್ಥೆ ಒದಗಿಸಲಾಗಿರುತ್ತದೆ ಹಾಗೂ ಸಂಸ್ಥೆಯಲ್ಲಿ ದೂರದ ರಾತ್ರಿ ಸೇವೆಯ ಪ್ರತಿಷ್ಠಿತ ವಾಹನಗಳಲ್ಲಿ ಮಾತ್ರ ನೀರು ಮತ್ತು ಟಿ.ವಿ. ವ್ಯವಸ್ಥೆಯನ್ನು ಕಲ್ಪಿಸಿದ್ದು, ಸಾಮಾನ್ಯ ವಾಹನಗಳಲ್ಲಿ ಈ ವ್ಯವಸ್ಥೆ ಕಲ್ಪಿಸಿರುವುದಿಲ್ಲ. ಪ್ರಸ್ತುತ ಕೋವಿಡ್-19ರ ನಿಮಿತ್ತ ಸದರಿ ವ್ಯವಸ್ಥೆಯನ್ನು ತಡೆಹಿಡಿಯಲಾಗಿದೆ.<br>ಹಳೆಯ ಬಸ್ಸುಗಳ ಓಡಾಟದ ಬಗ್ಗೆ ಅರಿವಿಗೆ ಬಂದಿದ್ದು, ಕೋವಿಡ್-19 ಹಿನ್ನಲೆಯಲ್ಲಿ ಸಂಸ್ಥೆಯ ಆರ್ಥಿಕ ಮುಗ್ಗಟ್ಟಿನಿಂದಾಗಿ ಪ್ರಸಕ್ತ ವರ್ಷದಲ್ಲಿ ಹೊಸ ಬಸ್‌ಗಳ ಖರೀದಿಯನ್ನು ಸ್ಥಗಿತಗೊಳಿಸಲಾಗಿದ್ದು, ಮುಂಬರುವ ದಿನಗಳಲ್ಲಿ ನೂತನ ಬಸ್ಸುಗಳನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು.<br>ಬೆಂ.ಮ.ಸಾ.ಸಂಸ್ಥೆ:-<br>ಹಳೆಯ ಬಸ್ಸುಗಳ ಓಡಾಟದ ಬಗ್ಗೆ ಅರಿವಿಗೆ ಬಂದಿದ್ದು, 2021-22ನೇ ಸಾಲಿನಲ್ಲಿ ನೂತನ 565 ಬಿ.ಎಸ್-6 ಲೇಲ್ಯಾಂಡ್ ಡೀಸೆಲ್ ಬಸ್ಸುಗಳನ್ನು ಸೇರ್ಪಡೆಗೊಳಿಸಲು, 300 ಹವಾನಿಯಂತ್ರಣ ರಹಿತ ಎಲೆಕ್ಟ್ರಿಕ್ ಬಸ್ಸುಗಳನ್ನು ಹಾಗೂ 90 ಹವಾನಿಯಂತ್ರಣ ರಹಿತ ಮಿಡಿ ಎಲೆಕ್ಟ್ರಿಕ್ ಬಸ್ಸುಗಳನ್ನು GCC ಆಧಾರದ ಮೇಲೆ ಕಾರ್ಯಾಚರಣೆಗೊಳಿಸಲು ಯೋಜಿಸಲಾಗಿದೆ. |

ಸಂಖ್ಯೆ: ಟಿಡಿ 281 ಟಿಸಿಕ್ಯೂ 2021

(ಬಿ. ಶ್ರೀರಾಮುಲು)
ಸಾರಿಗೆ ಮತ್ತು ಪರಿಶಿಷ್ಟ ಪಂಗಡಗಳ
ಕಲ್ಯಾಣ ಸಚಿವರು

**ಅನುಬಂಧ-ಅ**

## ಸಾರಿಗೆ ಸಿಬ್ಬಂದಿಯ ಆರೋಗ್ಯ ರಕ್ಷಣೆಗೆ ಇಲಾಖೆ ಕೈಗೊಂಡಿರುವ ಕಲ್ಯಾಣ ಕಾರ್ಯಗಳು

1. **ವೈದ್ಯಕೀಯ ಸೌಲಭ್ಯಗಳು :**

ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ ಕರ್ನಾಟಕ ಸರ್ಕಾರದ ನೌಕರರ (ವೈದ್ಯಕೀಯ ಹಾಜರಾತಿ ನಿಯಮಗಳು) 1963 ರನ್ನು ಅನುಸರಿಸುತ್ತಿದೆ. ಕ.ರಾ.ರ.ಸಾ.ಸಂ ನೌಕರರ ಕೆ.ಎಸ್.ಆರ್.ಟಿ.ಸಿ ಮೆಡಿಕಲ್ ಅಟೆಂಡೆನ್ಸ ರೆಗ್ಯೂಲೇಶನ ಪ್ರಕಾರ ರಾಜ್ಯ ಸರ್ಕಾರಕ್ಕೆ ಸಮನಾಗಿ ವೈದ್ಯಕೀಯ ವೆಚ್ಚದ ಮರುಪಾವತಿ ಪಡೆಯಲು ಅರ್ಹರಿರುತ್ತಾರೆ. ರಾಜ್ಯದ ಖಾಸಗಿ ವಲಯದಲ್ಲಿ ಕಾರ್ಯಾಚರಿಸುವ ಕೆಲವು ಸುಸಜ್ಜಿತ ಖಾಸಗಿ ಆಸ್ಪತ್ರೆಗಳನ್ನು ಗುರುತಿಸಿ ಅವುಗಳಿಗೆ ಸಂಸ್ಥೆಯ ವತಿಯಿಂದ ಮಾನ್ಯತೆ ನೀಡಲಾಗಿದೆ. ಹೀಗೆ ಮಾನ್ಯ ನೀಡಲಾದ ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆದು ಮರುಪಾವತಿಗಾಗಿ ಸಲ್ಲಿಸಲಾಗುವ ವೈದ್ಯಕೀಯ ಬಿಲ್ಲುಗಳನ್ನು ಸರ್ಕಾರದ ಸಿ.ಜಿ.ಹೆಚ್.ಎಸ್ ದರಗಳಂತೆ ಬಿಲ್ಲನ್ನು ಪರಿಶೋಧನೆಗೆ ಒಳಪಡಿಸಿ ಮರುಪಾವತಿಸಲಾಗುತ್ತಿದೆ. ಅಲ್ಲದೇ ತುರ್ತು ಸಂದರ್ಭದಲ್ಲಿ ಮಾನ್ಯತೆ ಪಡೆಯದೇ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆದು ಸಲ್ಲಿಸಲಾಗುವ ಬಿಲ್ಲುಗಳನ್ನು ಸರ್ಕಾರಿ ದರಪಟ್ಟಿಯ ಪ್ರಕಾರ ಬಿಲ್ಲನ್ನು ಪರಿಶೋಧನೆಗೆ ಒಳಪಡಿಸಿ ಮರುಪಾವತಿಸಲಾಗುತ್ತಿದೆ.

2. **ವೈದ್ಯಕೀಯ ಮುಂಗಡ :**

ನೌಕರರು ಮತ್ತು ಅವರ ಕುಟುಂಬದ ಸದಸ್ಯರು ತೀವ್ರ ಸ್ವರೂಪದ ಖಾಯಿಲೆಗಳಿಗಾಗಿ ಅಂದರೆ ಹೃದಯ, ಕಿಡ್ನಿ, ಮೂತ್ರಪಿಂಡ ಜೋಡಣೆ, ಮೆದುಳು, ಸ್ಪೈನಲ್ ಕಾರ್ಡ ಮತ್ತು ಕ್ಯಾನ್ಸರ್‌ನಂತ ಖಾಯಿಲೆಗಳ ಚಿಕಿತ್ಸೆ/ಶಸ್ತ್ರ, ಚಿಕಿತ್ಸೆಗೆ ಒಳಗಾಗಬೇಕಾದಲ್ಲಿ ಹಾಗೂ ಇನ್ನಿತರೆ ಎಲ್ಲ ರೀತಿಯ ಕಾಯಿಲೆಗಳಿಗೂ ಸಂಬಂಧಿಸಿದಂತೆ ಚಿಕಿತ್ಸೆ ಪಡೆಯುವ ನೌಕರರು ಮತ್ತು ಅವರ ಅವಲಂಬಿತರು ಕನಿಷ್ಠ 24 ಘಂಟೆ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ಚಿಕಿತ್ಸೆ ಪಡೆಯುವ ಎಲ್ಲ ಪ್ರಕರಣಗಳಲ್ಲಿಯೂ ಸಹ ವೈದ್ಯಕೀಯ ಮುಂಗಡ ಸೌಲಭ್ಯವನ್ನು ವಿಸ್ತರಿಸಲಾಗಿದೆ. ಮಹಿಳಾ ನೌಕರರ ತಂದೆ-ತಾಯಿಯವರ ಪ್ರಕರಣಗಳಲ್ಲಿಯೂ ಸಹ ವೈದ್ಯಕೀಯ ಮುಂಗಡ ಸೌಲಭ್ಯ ವಿಸ್ತರಿಸಲಾಗಿದೆ.

3. **ನೌಕರರು ಕರ್ತವ್ಯ ನಿರ್ವಹಿಸುವಾಗ ಅಪಘಾತ / ಶಾರೀರಕವಾಗಿ ಹಲ್ಲೆಗೊಳದ ಪ್ರಕರಣಗಳ ಚಿಕಿತ್ಸೆ:-**

ಸಂಸ್ಥೆಯ ನೌಕರರು ಕರ್ತವ್ಯ ನಿರ್ವಹಿಸುವಾಗ ಉಂಟಾಗುವ ಅಪಘಾತ ಪ್ರಕರಣಗಳಲ್ಲಿ ಮತ್ತು ಶಾರೀರಕವಾಗಿ ಹಲ್ಲೆಗೊಳಗಾಗಿ ಗಾಯಗೊಂಡ ಪ್ರಕರಣಗಳಲ್ಲಿ ನೌಕರರಿಗೆ ಉತ್ತಮ ವೈದ್ಯಕೀಯ ಚಿಕಿತ್ಸೆಯನ್ನು ಕೊಡಿಸುವ ನಿಟ್ಟಿನಲ್ಲಿ (ಸರಕಾರಿ/ಮಾನ್ಯತೆ ಪಡೆದ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ) ಚಿಕಿತ್ಸೆ ಪಡೆಯಲು ಅರ್ಹರಿರುತ್ತಾರೆ. ಅಂತಹ ಪ್ರಕರಣಗಳಲ್ಲಿ ಚಿಕಿತ್ಸಾ ವೆಚ್ಚದ ಪೂರ್ಣ ಮೊತ್ತವನ್ನು ಮರುಪಾವತಿಸಲು ಅವಕಾಶ ಕಲ್ಪಿಸಲಾಗಿದೆ.

4. **ಮಧ್ಯವ್ಯಸನಿ ಚಿಕಿತ್ಸಾ ಕಾರ್ಯಕ್ರಮ :**

ಸಾರ್ವಜನಿಕ ಸಾರಿಗೆಯಲ್ಲಿ ಮಧ್ಯಪಾನ ನಿರೋಧ ಕಾರ್ಯಕ್ರಮದ ಅಂಗವಾಗಿ WAPPA ವರ್ಕ ಪ್ಲೇಸ್ ಅಲ್ಕೋಹಾಲ್ ಪ್ರಿವೆನಶನ್ ಪ್ರೋಗ್ರಾಮ & ಆಕ್ಟಿವಿಟಿ) ಎಂಬ ಶಿರೋನಾಮದಲ್ಲಿ ಕರಾರಸಾ ನಿಗಮದಲ್ಲಿ ಮಧ್ಯವೆಸನಿ ಚಿಕಿತ್ಸಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಅಗತ್ಯತೆಯನ್ನು ಗಣನೆಗೆ ತೆಗೆದುಕೊಂಡು ಆಂಟಿ ಹಾಲ್ಕೊಹಾಲ್ ಪಾಲಿಸಿಯನ್ನು ರೂಪಿಸಲಾಯಿತು. ನಿಗಮದ ನಿರ್ದೇಶಕ ಮಂಡಳಿಯು ದಿನಾಂಕ:22-12-1998 ರಲ್ಲಿ ಕ.ರಾ.ರ.ಸಾ. ನಿಗಮದ ಮಧ್ಯಪಾನ ನಿರೋಧ ಪಾಲಿಸಿಯನ್ನು ಅನುಮೋದಿಸಿ ಈ ಯೋಜನೆಯ ಧ್ಯೇಯಗಳು ಕೆಳಕಂಡಂತಿರುತ್ತವೆ:

ಎ. ಪರಿಸರ ಸುರಕ್ಷತೆ ನೌಕರರ ಕಲ್ಯಾಣ ಹಾಗೂ ಆರೋಗ್ಯದ ಕಾಳಜಿಯನ್ನು ಗಮನದಲ್ಲಿ ಇಟ್ಟುಕೊಂಡು ಮದ್ಯಪಾನ ಬಳಕೆ ನಿಯಂತ್ರಣಕ್ಕೆ ಸಾರಿಗೆ ಸಂಸ್ಥೆಯು ಕಟ್ಟುಬದ್ಧವಾಗಿರುತ್ತವೆ.

ಬಿ. ಕಾರ್ಮಿಕರಿಗೆ ವಿಶೇಷವಾಗಿ ಪ್ರಯಾಣಿಕರ ಸುರಕ್ಷತೆ ಮತ್ತು ಮಧ್ಯಪಾನ ದುಷ್ಪರಿಣಾಮಗಳ ಬಗ್ಗೆ ತಿಳುವಳಿಕೆ ನೀಡುವುದು ಹಾಗೂ ಆ ಹವ್ಯಾಸಗಳನ್ನು ತ್ಯೇಜಿಸಲು ಬಯಸುವ ಎಲ್ಲ ನೌಕರರಿಗೆ ನೇರವು ನೀಡುವುದು.

ಸಿ. ಚಟಕ್ಕೆ ಬಲಿಯಾದ ನೌಕರರಿಗೆ ಅದರಿಂದ ಹೊರ ಬರಲು ಸಂಸ್ಥೆಯು ರೂ.5,000/- ವರೆಗೆ ನೇರವು ನೀಡಿ ಅಂತಹ ಕಾರ್ಮಿಕರು ಬಯಸುವ ಮಧ್ಯವ್ಯಸನಾ ಚಿಕಿತ್ಸಾ ಕೇಂದ್ರುದಲ್ಲಿ ದಾಖಲಾಗುವ ಅವರ ಖಾತೆಯಲ್ಲಿನ ರಜೆ ಮಂಜೂರು ಮಾಡಲಾಗುವುದು. ದಿನಾಂಕ:18-02-1999 ರಿಂದ ಕ.ರಾ.ರ.ಸಾ ನಿಗಮವು ಜಯನಗರ ಆಸ್ಪತ್ರೆಯಲ್ಲಿ ಹಾಗೂ ವಾ.ಕ.ರ.ಸಾ.ಸಂಸ್ಥೆಯ 03 ಆಯ್ದು ಮಧ್ಯವೆಸನಿ ಚಿಕಿತ್ಸಾ ಕೇಂದ್ರುಗಳನ್ನು ಗುರುತಿಸಲಾಗಿದೆ. (ಹುಬ್ಬಳ್ಳಿ 01, ಬೆಳಗಾವಿ 02) ಮಧ್ಯವೆಸನಿ ಚಿಕಿತ್ಸಾ ಘಟಕಗಳನ್ನು ಗುರುತಿಸಿ ಚಿಕಿತ್ಸೆ ಕೊಡಿಸಲು ಪ್ರಾರಂಭಿಸಲಾಗಿದೆ.

5. **ಆಪ್ಟಿಕಲ್ ಎಯ್ಡ್:**

ನೌಕರರನ ಪೂರ್ಣ ಸೇವಾ ಅವಧಿಯಲ್ಲಿ ಅವರ ಕುಟುಂಬದ ಸದಸ್ಯರು ಸೇರಿದಂತೆ 03 (ಮೂರು) ಬಾರಿ ಪಡೆಯಲು ಅವಕಾಶ ಕಲ್ಪಿಸಲಾಗಿದೆ ಹಾಗೂ ನೌಕರರು ಬಳಸುವ ಕನ್ನಡಕ ವೆಚ್ಚದ ರೂ.1000/-ಗಳನ್ನು ಮರುಪಾವತಿ ಮಾಡಲಾಗುವುದು. ಚಾಲಕರ ಯಾವುದೇ ಮಿತಿಯಿಲ್ಲದಂತೆ ಕನ್ನಡಕ ವೆಚ್ಚವನ್ನು ಮರುಪಾವತಿಗೆ ಸಲ್ಲಿಸಬಹುದಾಗಿದೆ.

6. **ಉಚಿತ ಆರೋಗ್ಯ ತಪಾಸಣೆ ಶಿಬಿರ**

ಸಂಸ್ಥೆಯ ನೌಕರರಿಗೆ ಮತ್ತು ಅವರ ಅವಲಂಬಿತರಿಗೆ ಸರ್ಕಾರಿ / ಸುಸಜ್ಜಿತ ಖಾಸಗಿ ಆಸ್ಪತ್ರೆಗಳ ಸಹಯೋಗದೊಂದಿಗೆ ಉಚಿತ ಕಣ್ಣು ತಪಾಸಣೆ, ಹೃದಯ ತಪಾಸಣೆ, ಮಧುಮೇಯ ತಪಾಸಣೆ ಮತ್ತು ಇತ್ಯಾದಿ ಕಾಯಿಲೆಗಳ ತಪಾಸಣೆಗಳನ್ನು ಉಚಿತವಾಗಿ ಪ್ರತಿವರ್ಷ ಹಮ್ಮಿಕೊಳ್ಳಲಾಗುತ್ತಿದೆ.

7. **ಐ.ಓ.ಡಿ ಸೌಲಭ್ಯ**

ಕರ್ತವ್ಯ ನಿರತರಾಗಿದ್ದಾಗ ಅಪಘಾತದಲ್ಲಿ ಗಾಯಗೊಂಡು ಕೆಲಸಕ್ಕೆ ಗೈರು ಹಾಜರಾದಲ್ಲಿ ಸಂಬಂಧಪಟ್ಟ ಪ್ರಾಧೀಕಾರಸ್ಥರು/ ವೈದ್ಯಾಧಿಕಾರಿಗಳು ಪ್ರಮಾಣಿಕೃತ ಚಿಕಿತ್ಸಾ ಅವಧಿಯನ್ನು ಕೆಲಸದ ಮೇಲೆ ಇದ್ದಂತೆ ಎಂದು ಪರಿಗಣಿಸಲಾಗುವುದು.

8. ಕೋವಿಡ್-19 ಸಾಂಕ್ರಾಮಿಕ ರೋಗದಿಂದ ನೌಕರರ ರಕ್ಷಣೆಗಾಗಿ ನೌಕರರಿಗೆ ಲಸಿಕೆ ನೀಡುವ ಶಿಬಿರಗಳನ್ನು ಏರ್ಪಡಿಸಲಾಗಿರುತ್ತದೆ. ಘಟಕ/ಕಛೇರಿ ಮತ್ತು ಸಂಸ್ಥೆಯ ವಾಹನಗಳನ್ನು ಸ್ಯಾನಿಟೈಜ್ ಮಾಡುವ ಕ್ರಮ ಜಾರಿಯಲ್ಲಿರುತ್ತದೆ. ನೌಕರರಿಗೆ ಮಾಸ್ಕ್/ಸ್ಯಾನಿಟೈಜರ್‌ಗಳನ್ನು ವಿತರಿಸಲಾಗುತ್ತಿದೆ.

## ಅನುಬಂಧ-ಆ

**ಸಾರಿಗೆ ನಿಗಮಗಳಲ್ಲಿ ಸಾರ್ವಜನಿಕರ ಸುಗಮ ಪ್ರಯಾಣಕ್ಕೆ/ಪ್ರಯಾಣಿಕರನ್ನು ಆಕರ್ಷಿಸಲು/ಉತ್ತಮ ಬಸ್ ಸೌಕರ್ಯವನ್ನು ಒದಗಿಸಲು ಕೈಗೊಂಡಿರುವ ಕ್ರಮಗಳು/ ಯೋಜನೆಗಳ ವಿವರಗಳು**

**ಕ.ರಾ.ರ.ಸಾ.ನಿಗಮ, ವಾ.ಕ.ರ.ಸಾ.ಸಂಸ್ಥೆ ಮತ್ತು ಕ.ಕ.ರ.ಸಾ.ನಿಗಮ**

- ಸಾರ್ವಜನಿಕ ಪ್ರಯಾಣಿಕರ ಹಿತದೃಷ್ಟಿಯಿಂದ AISO 52 ಕಾಯ್ದೆಯನ್ವಯ ಸುರಕ್ಷಿತ, ಸುಸಜ್ಜಿತ ಹಾಗೂ ಸಮರ್ಪಕವಾದ ಬಸ್ಸುಗಳ ಕಾರ್ಯಾಚರಣೆಯನ್ನು ಕೈಗೊಳ್ಳಲಾಗುತ್ತಿದೆ.
- ಸಾಮಾನ್ಯ, ನಗರ ಮತ್ತು ವೇಗದೂತ ಸಾರಿಗೆಗಳಲ್ಲದೆ ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ರಾಜಹಂಸ, ಐರಾವತ, ಎ.ಸಿ ಸ್ಲೀಪರ್, ನಾನ್ ಎಸಿ ಸ್ಲೀಪರ್, ಐರಾವತ ಕ್ಲಬ್‌ಕ್ಲಾಸ್, ಫ್ಲೈ-ಬಸ್, ಅಂಬಾರಿ ಡ್ರೀಮ್‌ಕ್ಲಾಸ್ ಮುಂತಾದ ಪ್ರತಿಷ್ಠಿತ ಸಾರಿಗೆಗಳನ್ನು ಕಾರ್ಯಾಚರಿಸಿ ರಾಜ್ಯದ ಹಾಗೂ ನೆರೆ ರಾಜ್ಯದ ಪ್ರಮುಖ ಸ್ಥಳಗಳಿಗೆ ಸಾರಿಗೆ ಸೌಲಭ್ಯವನ್ನು ಕಲ್ಪಿಸಲಾಗಿದೆ.
- ಕ.ರಾ.ರ.ಸಾ.ನಿಗಮವು ಟಿಕೆಟ್ ವಿತರಣೆಯಲ್ಲಿ ಸರಳತೆ ಹಾಗೂ ಪಾರದರ್ಶಕತೆ ತರುವ ನಿಟ್ಟಿನಲ್ಲಿ ಇ.ಟಿ.ಎಂ (Electronic Ticketing Machine) ಜಾರಿಗೆ ತಂದಿರುತ್ತದೆ.
- ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಮೈಸೂರು, ಮಂಗಳೂರು-ಉಡುಪಿ-ಕುಂದಾಪುರ, ಕುಶಾಲನಗರ-ಮಡಿಕೇರಿಗೆ ನೇರ ಸಂಪರ್ಕ ಕಲ್ಪಿಸಲು "Fly bus" ಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.
- ಸಾರ್ವಜನಿಕ ಪ್ರಯಾಣಿಕರಿಗೆ ಮುಂಗಡವಾಗಿ ಆಸನಗಳನ್ನು ಕಾಯ್ದಿರಿಸುವ ಅನುಕೂಲಕ್ಕಾಗಿ ನಿಗಮವು ಅವತಾರ್ (ಯಾವುದೇ ಸ್ಥಳದಿಂದ ಯಾವುದೇ ಸಮಯದಲ್ಲಿ ಟಿಕೆಟು ಕಾಯ್ದಿರಿಸುವಿಕೆ) ಗಣಕೀಕೃತ ಮುಂಗಡ ಬುಕಿಂಗ್ ಯೋಜನೆ ಜಾರಿಗೊಳಿಸಿದ್ದು, ರಾಜ್ಯದ ಹಾಗೂ ಹೊರ ರಾಜ್ಯಗಳ ಪ್ರಮುಖ ಸ್ಥಳಗಳಲ್ಲಿ ನಿಗಮದ ಕೌಂಟರುಗಳು/ಖಾಸಗಿ ಬುಕಿಂಗ್ ಏಜೆಂಟರುಗಳ ಮೂಲಕ ಮುಂಗಡ ಟಿಕೆಟ್ ಬುಕಿಂಗ್ ವ್ಯವಸ್ಥೆಯನ್ನುಕಲ್ಪಿಸಲಾಗಿದೆ.
- ಮುಂಗಡ ಆಸನಗಳನ್ನು ಗುಂಪಾಗಿ (ಅಂದರೆ ನಾಲ್ಕು ಜನ ಮತ್ತು ಅದಕ್ಕೆ ಮೇಲ್ಪಟ್ಟು) ಕಾಯ್ದಿರಿಸಿದಲ್ಲಿ ಶೇ.5 ರಷ್ಟು ವಿಶೇಷ ರಿಯಾಯಿತಿಯನ್ನು ಕಲ್ಪಿಸಲಾಗಿದೆ ಹಾಗೂ ಮುಂಗಡ ಆಸನವನ್ನು ಹೋಗುವ ಮತ್ತು ಬರುವ (Onward/Return) ಒಮ್ಮೆಲೆ ಕಾಯ್ದಿರಿಸಿದಲ್ಲಿ ಬರುವ (Return)ಪ್ರಯಾಣಕ್ಕೆ ಶೇ.10 ರಷ್ಟು ವಿಶೇಷ ರಿಯಾಯಿತಿಯನ್ನು ಕಲ್ಪಿಸಲಾಗಿದೆ.
- ಕ.ರಾ.ರ.ಸಾ.ನಿಗಮದ ಸಾರಿಗೆಗಳಲ್ಲಿ ಮುಂಗಡ ಆಸನಗಳನ್ನು ಕಾಯ್ದಿರಿಸಲು ಜಿ.ಪಿ.ಆರ್.ಎಸ್. ಸೌಲಭ್ಯವುಳ್ಳ ಮೊಬೈಲ್ ದೂರವಾಣಿ ಮೂಲಕ ಮುಂಗಡ ಟಿಕೆಟ್ ಕಾಯ್ದಿರಿಸುವ ಎಂ-ಬುಕಿಂಗ್ ಮತ್ತು ಇ-ಬುಕಿಂಗ್ ವ್ಯವಸ್ಥೆ ಜಾರಿಗೊಳಿಸಿದೆ ಹಾಗೂ ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಆಪ್ ಮೂಲಕ ಮುಂಗಡ ಟಿಕೆಟ್ ಕಾಯ್ದಿರಿಸುವ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಸದರಿ ಮುಂಗಡ ಆಸನಗಳನ್ನು ಕಾಯ್ದಿರಿಸಲು ಎಲ್ಲಾ ಡೆಬಿಟ್/ಕ್ರೆಡಿಟ್ ಕಾರ್ಡ್‌ಗಳ ಮೂಲಕ ಹಣ ಪಾವತಿಸಲು ಅವಕಾಶ ಕಲ್ಪಿಸಿದ್ದು, ಈ ಸಂಬಂಧ ತಗಲುವ ಗೇಟ್‌ವೇ ಶುಲ್ಕವನ್ನು ಪ್ರಯಾಣಿಕರಿಂದ ಪಡೆಯುತ್ತಿರುವುದಿಲ್ಲ.
- ಸಾರ್ವಜನಿಕ ಪ್ರಯಾಣಿಕರು ನಿಲ್ದಾಣವಾರು ವಾಹನಗಳ ನಿರ್ಗಮನಗಳ ಮಾಹಿತಿ ಪಡೆಯಲು ಹುಬ್ಬಳ್ಳಿ-ಧಾರವಾಡ ನಗರ ಸಾರಿಗೆ (ಚಿಗರಿ) ವಾಹನಗಳಲ್ಲಿ ಐ.ಟಿ.ಎಸ್

ತಂತ್ರಾಂಶ ವ್ಯವಸ್ಥೆಯನ್ನು ಅಳವಡಿಸಲಾಗಿದ್ದು, ಸದರಿ ವಾಹನಗಳಲ್ಲಿ ಸಾರ್ವಜನಿಕ ಪ್ರಯಾಣಿಕರಿಗೆ ನಿಲ್ದಾಣವಾರು ಉದ್ಘೋಷಣಾ ವ್ಯವಸ್ಥೆಯನ್ನು ಅಳವಡಿಸಲಾಗಿದೆ.

- ಕೌಂಟರ್‌ಗಳ ಮೂಲಕ ಮುಂಗಡ ಟಿಕೆಟ್ ಕಾಯ್ದಿರಿಸಿರುವ ಟಿಕೆಟ್‌ಗಳಿಗೆ ಪ್ರಯಾಣವನ್ನು ಮುಂದೂಡುವ ಮತ್ತು ಹಿಂದೂಡುವ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ.
- ಒಂಟಿಯಾಗಿ ಪ್ರಯಾಣ ಮಾಡುವ ಮಹಿಳೆಯರಿಗಾಗಿ, ಮಹಿಳೆಯರು ಮಾತ್ರ ಕಾಯ್ದಿರಿಸಬಹುದಾದ ಆಸನಗಳ ವ್ಯವಸ್ಥೆ ಕಲ್ಪಿಸಲಾಗಿದೆ.
- ಮುಂಗಡ ಕಾಯ್ದಿರಿಸಿರುವ ಪ್ರಯಾಣಿಕರಿಗೆ ಪ್ರಯಾಣ ವೇಳೆಯ ಎರಡು ಗಂಟೆಯ ಮುಂಚಿತವಾಗಿ ನಗರ ಸಾರಿಗೆಗಳಿರುವ ನಗರಗಳಲ್ಲಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ.
- ಸಾರ್ವಜನಿಕ ಪ್ರಯಾಣಿಕರು ನಿಗಮದ ವತಿಯಿಂದ ಕಾರ್ಯಾಚರಣೆಯಾಗುತ್ತಿರುವ ಸಾರಿಗೆಗಳ ನಿಖರವಾದ ಮಾಹಿತಿ ಪಡೆಯಲು ಹಾಗೂ ಆಸನಗಳ ಲಭ್ಯತೆಯನ್ನು ಮುಂಚಿತವಾಗಿ ತಿಳಿಯಲು ಅನುಕೂಲವಾಗುವ ನಿಟ್ಟಿನಲ್ಲಿ ವಿ.ಟಿ.ಎಂ.ಎಸ್(ವೆಹಿಕಲ್ ಟ್ರಾಕಿಂಗ್ & ಮಾನಿಟರಿಂಗ್ ಸಿಸ್ಟಮ್) ವ್ಯವಸ್ಥೆಯನ್ನು 2000 ಬಸ್‌ಗಳಲ್ಲಿ ಅಳವಡಿಸಲಾಗಿದೆ.
- ಮುಂಗಡವಾಗಿ ಸೀಟು ಕಾಯ್ದಿರಿಸುವ ಪ್ರಯಾಣಿಕರಿಗೆ ಅವರುಗಳು ಪ್ರಯಾಣ ಮಾಡುವ ವಾಹನ ಸಂಖ್ಯೆ, ನಿರ್ಗಮನದ ಸಮಯ ಹಾಗೂ ಸದರಿ ವಾಹನದಲ್ಲಿ ಕರ್ತವ್ಯ ನಿರ್ವಹಿಸುವ ಚಾಲನಾ ಸಿಬ್ಬಂದಿಯ ಮೊಬೈಲ್ ಸಂಖ್ಯೆಗಳನ್ನು ಎಸ್.ಎಂ.ಎಸ್. ಮೂಲಕ ಮಾಹಿತಿಯನ್ನು ಒದಗಿಸಲಾಗುತ್ತಿದೆ.
- ಪ್ರಯಾಣಿಕರ ಅನುಕೂಲಕ್ಕಾಗಿ ಆನ್‌ಲೈನ್ ಅಥವಾ ಮೊಬೈಲ್ ಮೂಲಕ ಟಿಕೆಟನ್ನು ಕಾಯ್ದಿರಿಸಿ, ಎಂ-ಟಿಕೆಟನ್ನು ಲ್ಯಾಪ್‌ಟಾಪ್/ ಐಪ್ಯಾಡ್/ಟ್ಯಾಬ್ಲೆಟ್ ಅಥವಾ ಮೊಬೈಲ್ ಫೋನ್‌ನಲ್ಲಿ ತೋರಿಸಿ ಪ್ರಯಾಣಿಸಲು ಅನುವು ಮಾಡಿಕೊಡಲಾಗಿದೆ.
- ಸಾರ್ವಜನಿಕ ಪ್ರಯಾಣಿಕರು ನಿಲ್ದಾಣವಾರು ವಾಹನಗಳ ನಿರ್ಗಮನಗಳ ಮಾಹಿತಿ ಪಡೆಯಲು ಮೈಸೂರು ನಗರದ ನಗರ ಸಾರಿಗೆ ವಾಹನಗಳಲ್ಲಿ ಐ.ಟಿ.ಎಸ್. (ಇಂಟೆಲಿಜೆಂಟ್ ಟ್ರಾನ್ಸ್‌ಪೋರ್ಟ್ ಸಿಸ್ಟಮ್) ವ್ಯವಸ್ಥೆಯನ್ನು ಅಳವಡಿಸಲಾಗಿದ್ದು, ಸದರಿ ವಾಹನಗಳಲ್ಲಿ ಸಾರ್ವಜನಿಕ ಪ್ರಯಾಣಿಕರಿಗೆ ನಿಲ್ದಾಣವಾರು ಘೋಷಣೆಯ ವ್ಯವಸ್ಥೆಯನ್ನು ಅಳವಡಿಸಲಾಗಿದೆ (ಪ್ಯಾಸೆಂಜರ್ ಅನೌನ್ಸ್‌ಮೆಂಟ್ ಸಿಸ್ಟಮ್).
- ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ನಿಗಮದ ಪ್ರಮುಖ 107 ಬಸ್ ನಿಲ್ದಾಣಗಳಲ್ಲಿ ವಾಹನಗಳ ಸಂಖ್ಯೆ, ನಿರ್ಗಮನದ ವೇಳೆ, ತಲುಪುವ ಸ್ಥಳ, ಮಾರ್ಗದ ಮಾಹಿತಿಯನ್ನು ಸಾರ್ವಜನಿಕ ಉದ್ಘೋಷಣಾ ವ್ಯವಸ್ಥೆಯ ಮುಖಾಂತರ ತಿಳಿಸಲಾಗುತ್ತಿದೆ.
- ಕ.ರಾ.ರ.ಸಾ.ನಿಗಮದ ವತಿಯಿಂದ ಬೆಂಗಳೂರಿನಿಂದ ತಿರುಪತಿ-ತಿರುಮಲಕ್ಕೆ ಮತ್ತು ಪ್ರಮುಖ ಪ್ರವಾಸಿ ತಾಣಗಳಿಗೆ ಪ್ಯಾಕೇಜ್ ಟೂರ್‌ಗಳನ್ನು ಆಚರಣೆ ಮಾಡಲಾಗುತ್ತಿದೆ.
- ಸಾರ್ವಜನಿಕರು ಲಗ್ಗೇಜು/ಪಾರ್ಸೆಲ್ ಗಳನ್ನು ತ್ವರಿತ ಮತ್ತು ಸುರಕ್ಷಿತವಾಗಿ ಸಾಗಿಸಲು "ನಮ್ಮ ಕಾರ್ಗೋ" ಪಾರ್ಸಲ್ ಸೇವೆಯನ್ನು ಆರಂಭಿಸಲಾಗಿದೆ.
- ವಾ.ಕ.ರ.ಸಾ.ಸಂಸ್ಥೆಯಿಂದ ಪ್ರಮುಖ ಸ್ಥಳಗಳಿಂದ ವಿಶೇಷ ಅವಧಿಯಲ್ಲಿ ಪ್ರವಾಸಿ ತಾಣಗಳಿಗೆ ಪ್ಯಾಕೇಜ್ ಟೂರನ್ನು ವ್ಯವಸ್ಥೆಗೊಳಿಸಿದೆ.
- ಕ.ಕ.ರ.ಸಾ.ಸಂಸ್ಥೆಯಿಂದ ಕಲಬುರಗಿ ವಿಮಾನ ನಿಲ್ದಾಣದಿಂದ (ವಿಮಾನ ಬರುವ ಸಮಯಕ್ಕೆ) ಕಲಬುರಗಿ ಕೇಂದ್ರ ಬಸ್ ನಿಲ್ದಾಣಕ್ಕೆ ಬರಲು ನಗರ ಸಾರಿಗೆಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ.
- ವಾಹನಗಳ ಹೊರ ಮೈ ಹಾಗೂ ಒಳ ಮೈ ಸ್ವಚ್ಛತೆಗೆ ಆದ್ಯ ಗಮನ ನೀಡಲಾಗುತ್ತಿದೆ.

**ಬೆಂ.ಮ.ಸಾ.ಸಂಸ್ಥೆ:**

- ಪ್ರಯಾಣಿಕರು ಹಾಗೂ ನಿರ್ವಾಹಕರ ನಡುವೆ ನಗದು ವ್ಯವಹಾರವನ್ನು ಕಡಿಮೆಗೊಳಿಸಲು ಹಾಗೂ ಚಿಲ್ಲರೆ ಸಮಸ್ಯೆ ನಿವಾರಿಸುವ ನಿಟ್ಟಿನಲ್ಲಿ ಪ್ರಯಾಣ ದರ ರೂ.5/-ರ ಗುಣಕದಲ್ಲಿ ನಿಗದಿಪಡಿಸಿ ಪುನರ್‌ರಚಿತ ಪ್ರಯಾಣದರಗಳನ್ನು ಆಕರಿಸಲಾಗುತ್ತಿದೆ.
- ದಿನದ ಪಾಸು, ಮಾಸಿಕ ಪಾಸು ಮತ್ತು ವಾರದ ಪಾಸುಗಳನ್ನು ವಿತರಿಸಲಾಗುತ್ತಿದೆ.
- ಹಿರಿಯ ನಾಗರಿಕರಿಗೆ ಚೀಟಿ ಮತ್ತು ಮಾಸಿಕ ಪಾಸುಗಳಲ್ಲಿ ರಿಯಾಯಿತಿಯನ್ನು ಕಲ್ಪಿಸಲಾಗಿದೆ.
- ವಿದ್ಯಾರ್ಥಿ ಸಮುದಾಯದ ಅನುಕೂಲಕ್ಕಾಗಿ ವಿದ್ಯಾರ್ಥಿ ರಿಯಾಯಿತಿ ಪಾಸುಗಳನ್ನು ವಿತರಿಸಲಾಗುತ್ತಿದೆ.
- ವಿಶೇಷಚೇತನರಿಗೆ ಅತ್ಯಂತ ರಿಯಾಯಿತಿ ದರದಲ್ಲಿ ಹಾಗೂ ಅಂಧರಿಗೆ ಉಚಿತ ಪಾಸುಗಳನ್ನು ವಿತರಿಸಲಾಗುತ್ತಿದೆ.
- ಮಹಿಳೆಯರಿಗೆ, ಹಿರಿಯ ನಾಗರೀಕರಿಗೆ ಮತ್ತು ವಿಶೇಷಚೇತನರಿಗೆ ಬಸ್ಸುಗಳಲ್ಲಿ ಆಸನಗಳನ್ನು ಮೀಸಲಿರಿಸಲಾಗಿದೆ.
- ಕರ್ನಾಟಕ ಕಟ್ಟಡ ಮತ್ತು ಇತರೇ ನಿರ್ಮಾಣ ಕಲ್ಯಾಣ ಮಂಡಳಿಯ ಸಹಯೋಗದೊಂದಿಗೆ, ಕರ್ನಾಟಕ ಕಟ್ಟಡ ಮತ್ತು ಇತರೇ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿಯ ನೋಂದಾಯಿತ ಕಾರ್ಮಿಕರಿಗೆ ಉಚಿತ ಬಸ್ ಪಾಸುಗಳನ್ನು ವಿತರಿಸಲಾಗುತ್ತಿದೆ.
- ಮೆಟ್ರೋ ರೈಲು ಪ್ರಯಾಣಿಕರಿಗೆ ಮೆಟ್ರೋ ರೈಲು ನಿಲ್ದಾಣದಿಂದ ವಾಸಸ್ಥಳಗಳಿಗೆ ತಲುಪಲು ಮೆಟ್ರೋ ಫೀಡರ್ ಸೇವೆಗಳನ್ನು ಒದಗಿಸಲಾಗುತ್ತಿದೆ.
- ನಗರದ ಪ್ರಮುಖ ಸ್ಥಳಗಳಲ್ಲಿ ಬಸ್ ನಿಲ್ದಾಣಗಳನ್ನು ನಿರ್ಮಿಸಿ, ಸಾರ್ವಜನಿಕ ಪ್ರಯಾಣಿಕರಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ.